# ಸಭೆಯ ನಡಾವಳಿಗಳು

ದಿನಾಂಕ: 06-04-2021 ರ ಸಮಯ 11-00 ಗಂಟೆ ಪೂರ್ವಾಹ್ನದಂದು ವಾರ್ಡ್ ಸಂಖ್ಯೆ 195 ರ ವಾರ್ಡ್ ಸಮಿತಿಯ ಸಭೆಯನ್ನು ನೋಡೆಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಗಿರುವ ಸಭೆಯ ನಡಾವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ ಕೆ.ವಿ.ಶಶಿಕುಮಾರ್ | ನೋಡಲ್ ಅಧಿಕಾರಿ/ಕಾರ್ಯಪಾಲಕ ಅಭಿಯಂತರರು |
| 2 | ಶ್ರೀ ರಂಗಸ್ವಾಮಿ ಸ.ಕಂ.ಅ | ಸದಸ್ಯ ಕಾರ್ಯದರ್ಶಿ/ಸಹಾಯಕ ಕಂದಾಯ ಅಧಿಕಾರಿ |
| 3 | ಶ್ರೀಮತಿ ಶೋಭಾ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ.ಮೋಹನ್.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ಮಾರುತಿ ಕೆ.ಎನ್ | ಸಹಾಯಕ ಇಂಜಿನಿಯರ್, ವಾರ್ಡ್ ನಂ.195 |
| 6 | ಶ್ರೀ ಕಿರಣ್ | ಕಿರಿಯ ಅಭಿಯಂತರರು BESCOM (ಎಸ್-6) |
| 7 | ಶ್ರೀ.ಜಿ.ವಿ.ಹೆಬ್ಬಾರ್ | ಸದಸ್ಯರು |
| 8 | ಶ್ರೀ.ಅನಂತ ಪದ್ಮನಾಬ | ಸದಸ್ಯರು |
| 9 | ಶ್ರೀ.ಕೆಂಪರಾಜು | ಸದಸ್ಯರು |

**ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಯಿತು.**

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಸಭೆಯಲ್ಲಿ ಓದಲಾಯಿತು.
2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು

| ಕ್ರಮ ಸಂಖ್ಯೆ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ವಾರ್ಡಿನ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗುತ್ತಿರುವುದು ಕಂಡುಬಂದಿರುವ ಬಗ್ಗೆ ಚರ್ಚಿಸಲಾಯಿತು | ಕೋವಿಡ್-19 ಹೆಚ್ಚಾಗುತ್ತಿರುವುದರಿಂದ ಅನಗತ್ಯವಾಗಿ ಮನೆಯಿಂದ ಹೊರಗೆ ಹೋಗದೇ ಅವಶ್ಯಕವಿದ್ದಲ್ಲಿ ಮಾತ್ರ ಮಾಸ್ಕ್ ಧರಿಸಿ ಮನೆಯಿಂದ ಹೊರಹೋಗಲು ತಿಳಿಸಿ 45 ವರ್ಷ ವಯಸ್ಸಿನ ಮೇಲ್ಪಟ್ಟ ಸಾರ್ವಜನಿಕರು ವಾರ್ಡ್ ನಂ.195 ಕೋಣನಕುಂಟೆ ವ್ಯಾಪ್ತಿಯಲ್ಲಿ ಬರುವ ಆರ್.ಬಿ.ಐ ಲೇಔಟ್ ವಾರ್ಡ್ ಕಛೇರಿಯಲ್ಲಿ ವ್ಯಾಕ್ಸೀನ್ ತೆಗೆದುಕೊಳ್ಳುವಂತೆ ಸಾರ್ವಜನಿಕರಲ್ಲಿ ಜನ ಜಾಗೃತಿ ಮೂಡಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ ನೋಡಲ್ ಅಧಿಕಾರಿಗಳು ತಿಳಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘನತ್ಯಾಜ್ಯ) |

Scanned with CamScanner

| ಕ್ರಮ ಸಂಖ್ಯೆ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 2 | ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಾಟರ್ ಟ್ಯಾಂಕ್ ಹತ್ತಿರ ಹಳೆಯ ಚರಂಡಿಯನ್ನು ದುರಸ್ಥಿ ಪಡಿಸುವ ಬಗ್ಗೆ | ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು, ಕೈಗೊಂಡಿರುವ ಕ್ರಮದ ಬಗ್ಗೆ ವಾರ್ಡ್ ಕಮೀಟಿ ಸದಸ್ಯರಾದ ಶ್ರೀ ಹೆಬ್ಬಾರ್ ರವರು ಪ್ರಶಂಸೆ ವ್ಯಕ್ತ ಪಡಿಸಿರುತ್ತಾರೆ. | ಸಹಾಯಕ ಅಭಿಯಂತರರು ವಾರ್ಡ್ ನಂ.195 |
| 4 | ವಾರ್ಡ್ ವ್ಯಾಪ್ತಿಯಲ್ಲಿ ಬರುವ ಆರ್.ಬಿ.ಐ ಲೇಔಟ್ ಅಡ್ಡ ರಸ್ತೆಯಲ್ಲಿ ವಿದ್ಯುತ್ ಕಂಬ ಮುರಿದು ರಸ್ತೆಯ ಬದಿಯಲ್ಲಿ ಬಿದ್ದಿರುವ ಬಗ್ಗೆ. | ವಾರ್ಡ್ ವ್ಯಾಪ್ತಿಯಲ್ಲಿ ಬರುವ ಆರ್.ಬಿ.ಐ ಲೇಔಟ್ ಅಡ್ಡ ರಸ್ತೆಯಲ್ಲಿ ವಿದ್ಯುತ್ ಕಂಬ ಮುರಿದು ರಸ್ತೆಯ ಬದಿಯಲ್ಲಿ ಬಿದ್ದಿರುವ ಕಂಬವನ್ನು ತುರ್ತಾಗಿ ಬದಲಾಯಿಸಲು ಹಾಜರಿದ್ದ ಬೆಸ್ಕಾಂ ಸಿಬ್ಬಂದಿ ರವರಿಗೆ ತಿಳಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ-ಎಸ್12) |
| 5 | ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಯಿತು | ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತ್ವರಿತವಾಗಿ ಮುಕ್ತಾಯಗೊಳಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲು ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು | ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ) |
| 6 | ವಾರ್ಡ್ ಸಮಿತಿ ಸಭೆಯಲ್ಲಿ ಕೆಲ ಇಲಾಖೆಯ ಅಧಿಕಾರಿಗಳು ಗೈರುಹಾಜರಾಗುತ್ತಿರುವ ಬಗ್ಗೆ. | ವಾರ್ಡ್ ಸಮಿತಿ ಸಭೆಯಲ್ಲಿ ಕೆಲ ಇಲಾಖೆಯ ಅಧಿಕಾರಿಗಳು ಗೈರುಹಾಜರಾಗುತ್ತಿರುವ ಬಗ್ಗೆ ನೋಡಲ್ ಅಧಿಕಾರಿಗಳು ಮತ್ತು ಕಮೀಟಿಯ ಸದಸ್ಯರುಗಳು ವಿಷಾದ ವ್ಯಕ್ತ ಪಡಿಸಿರುತ್ತಾರೆ. ಮುಂದುವರೆದಂತೆ ಈಗಾಗಲೇ ಗೈರುಹಾಜರಾಗುತ್ತಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಲು ಕಾರ್ಯದರ್ಶಿ ರವರಿಗೆ ಆದೇಶಿಸಿರುತ್ತಾರೆ. | ಸಹಾಯಕ ಕಂದಾಯ ಅಧಿಕಾರಿಗಳು (ಯಲಚೇನಹಳ್ಳಿ ವಲಯ) |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

-ಸಹಿ-
ನೋಡೆಲ್ ಅಧಿಕಾರಿ
ವಾರ್ಡ್-195 ಬೃ.ಬೆಂ.ಮ.ಪಾಲಿಕೆ

Scanned with CamScanner